**All India Radio: Bangalore**
**National Bulletin In Kannada**
**07.08.2026  07.35 a.m.**

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**07.08.2026  07.35 a.m.**

---

ಮುಖ್ಯಾಂಶಗಳು

೧. ಇಂದು ರಾಷ್ಟ್ರೀಯ ಕೈಮಗ್ಗ ದಿನ; ನೇಕಾರ ಕುಟುಂಬಗಳು ಮತ್ತು ಕರಕುಶಲ ಕರ್ಮಿಗಳನ್ನು ಬೆಂಬಲಿಸುವಂತೆ ನಾಗರಿಕರಿಗೆ ಪ್ರಧಾನಿ ನರೇಂದ್ರ ಮೋದಿ ಕರೆ

೨. ನವದೆಹಲಿಯಲ್ಲಿಂದು ಜವಳಿ ಸಚಿವಾಲಯದಿಂದ ರಾಷ್ಟ್ರೀಯ ಕೈಮಗ್ಗ ದಿನದ ವಿಶೇಷ ಕಾರ್ಯಕ್ರಮ ಆಯೋಜನೆ; ರಾಷ್ಟ್ರಪತಿ ಸೇರಿದಂತೆ ಗಣ್ಯರ ಉಪಸ್ಥಿತಿ

೩. ಅಮೆರಿಕದ ಜನ್ಮಸಿದ್ಧ ಪೌರತ್ವವನ್ನು ನಿಯಂತ್ರಿಸಲು ಅಮೆರಿಕಾ ಅಧ್ಯಕ್ಷರಿಂದ ಎರಡು ಕಾರ್ಯಕಾರಿ ಆದೇಶಗಳಿಗೆ ಸಹಿ

೪. ಕೊರಿಯಾ ಮಾಸ್ಟರ್ಸ್ ಬ್ಯಾಡ್ಮಿಂಟನ್; ಮಹಿಳಾ ಸಿಂಗಲ್ಸ್ ಕ್ವಾರ್ಟರ್ ಫೈನಲ್‌ನಲ್ಲಿ ಇಂದು, ಭಾರತದ ತನ್ವಿ, ರಕ್ಷಿತಾ ಮತ್ತು ಅಶ್ಮಿತಾ ಕಣದಲ್ಲಿ

೫. ಮಹಿಳಾ ಟಿ೨೦ ಏಷ್ಯಾ ಕಪ್ ೨೦೨೬: ಸೆಪ್ಟೆಂಬರ್ ೫ ರಂದು ಭಾರತ-ಪಾಕಿಸ್ತಾನ ಪಂದ್ಯ

---

ಪ್ರತಿಯೊಬ್ಬ ನಾಗರಿಕನೂ ಇಂದು ರಾಷ್ಟ್ರೀಯ ಕೈಮಗ್ಗ ದಿನವನ್ನು ಅತ್ಯಂತ ಉತ್ಸಾಹ ಮತ್ತು ಸಂತೋಷದಿಂದ ಆಚರಿಸಬೇಕು ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಕರೆ ನೀಡಿದ್ದಾರೆ.

ಈ ಕುರಿತು ವೀಡಿಯೊ ಸಂದೇಶವೊಂದನ್ನು ಹಂಚಿಕೊಂಡಿರುವ ಅವರು, ಭಾರತದ ಸ್ವಾತಂತ್ರ್ಯ ಸಂಗ್ರಾಮದ ಭಾಗವಾಗಿ ೧೯೦೫ರ ಆಗಸ್ಟ್ ೭ ರಂದು ಸ್ವದೇಶಿ ಚಳವಳಿಯನ್ನು ಪ್ರಾರಂಭಿಸಲಾಯಿತು. ಈ ಐತಿಹಾಸಿಕ ಹೋರಾಟದಲ್ಲಿ ಸಮಾಜದ ಎಲ್ಲಾ ವರ್ಗದ ಜನರೂ ಒಗ್ಗೂಡಿ ಬ್ರಿಟಿಷ್ ಆಡಳಿತದ ವಿರುದ್ಧ ಹೋರಾಡಿದ್ದರು ಎಂದು ಸ್ಮರಿಸಿದ್ದಾರೆ. ಸ್ವಹಸ್ತದಿಂದ

ಸುಂದರ ವಸ್ತ್ರಗಳನ್ನು ಸಿದ್ಧಪಡಿಸುವ ಬಡ ನೇಕಾರ ಕುಟುಂಬಗಳು ಮತ್ತು ಕರಕುಶಲ ಕರ್ಮಿಗಳನ್ನು ಪ್ರತಿಯೊಬ್ಬರೂ ಬೆಂಬಲಿಸಬೇಕು ಎಂದು ಪ್ರಧಾನಿಯವರು ತಿಳಿಸಿದ್ದಾರೆ.

ಧ್ವನಿ - ಪ್ರಧಾನಿ ನರೇಂದ್ರ ಮೋದಿ

---

೧೨ನೇ ರಾಷ್ಟ್ರೀಯ ಕೈಮಗ್ಗ ದಿನಾಚರಣೆಯ ಅಂಗವಾಗಿ ಜವಳಿ ಸಚಿವಾಲಯವು ಇಂದು ರಾಷ್ಟ್ರಪತಿ ಭವನದ ಸಾಂಸ್ಕೃತಿಕ ಕೇಂದ್ರದಲ್ಲಿ ವಿಶೇಷ ಕಾರ್ಯಕ್ರಮ ಆಯೋಜಿಸಲಿದೆ. ರಾಷ್ಟ್ರಪತಿ ದ್ರೌಪದಿ ಮುರ್ಮು ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದು, ಕೇಂದ್ರ ಜವಳಿ ಸಚಿವ ಗಿರಿರಾಜ್ ಸಿಂಗ್ ಹಾಗೂ ರಾಜ್ಯ ಸಚಿವ ಪಬಿತ್ರ ಮಾರ್ಗರಿಟಾ ಪಾಲ್ಗೊಳ್ಳಲಿದ್ದಾರೆ.

ಕಾರ್ಯಕ್ರಮದಲ್ಲಿ ೨೦೨೪ನೇ ಸಾಲಿನ ಸಂತ ಕಬೀರ್ ಕೈಮಗ್ಗ ಪ್ರಶಸ್ತಿ ಹಾಗೂ ರಾಷ್ಟ್ರೀಯ ಕೈಮಗ್ಗ ಪ್ರಶಸ್ತಿಗಳನ್ನು ೨೨ ಮಂದಿ ನೇಕಾರರಿಗೆ ಪ್ರದಾನ ಮಾಡಲಾಗುವುದು ಹಾಗೂ ನಾಲ್ಕು ಸ್ಮರಣಾರ್ಥ ಅಂಚೆ ಚೀಟಿಗಳನ್ನು ಸಹ ಬಿಡುಗಡೆ ಮಾಡಲಾಗುವುದು.

೧೯೦೫ರ ಆಗಸ್ಟ್ ೭ರಂದು ಆರಂಭವಾದ ಸ್ವದೇಶಿ ಚಳವಳಿಯನ್ನು ಸ್ಮರಿಸುವ ಸಲುವಾಗಿ ಪ್ರತಿವರ್ಷ ಆಗಸ್ಟ್ ೭ರಂದು ರಾಷ್ಟ್ರೀಯ ಕೈಮಗ್ಗ ದಿನ ಆಚರಿಸಲಾಗುತ್ತದೆ.

---

೨೩ ಸಾವಿರ ೭೩೧ ಕೋಟಿ ರೂಪಾಯಿಗಳ ಒಟ್ಟು ವೆಚ್ಚದ ರಾಷ್ಟ್ರೀಯ ಜೈವಿಕ ಇಂಧನ ಯೋಜನೆ 'ಗೋಬರ್ಧನ್' ಅನ್ನು ಕೇಂದ್ರ ಸಚಿವ ಸಂಪುಟ ನಿನ್ನೆ ಅನುಮೋದಿಸಿದೆ.

ಈ ಕುರಿತು ನವದೆಹಲಿಯಲ್ಲಿ ನಿನ್ನೆ ಮಾಧ್ಯಮಗಳಿಗೆ ಮಾಹಿತಿ ನೀಡಿದ ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್, ಈ ಯೋಜನೆ ೧.೫ ಲಕ್ಷ ಉದ್ಯೋಗಗಳನ್ನು ಸೃಷ್ಟಿಸುತ್ತದೆ. 'ಗೋಬರ್ಧನ್'- ಭಾರತದ ಶುದ್ಧ ಇಂಧನ ಪ್ರಯಾಣದಲ್ಲಿ ಒಂದು ನಿರ್ಣಾಯಕ ಮೈಲುಗಲ್ಲನ್ನು ಗುರುತಿಸುತ್ತದೆ. ಇದು ದೇಶದ ಹೇರಳವಾದ ಕೃಷಿ ತ್ಯಾಜ್ಯ, ದನದ ಸಗಣಿ, ಮಣ್ಣು, ಸಾವಯವ ತ್ಯಾಜ್ಯ ಮತ್ತು ಇತರ ಜೀವರಾಶಿ ಸಂಪನ್ಮೂಲಗಳನ್ನು ಶುದ್ಧ ಇಂಧನ, ಸಾವಯವ ಗೊಬ್ಬರ, ಗ್ರಾಮೀಣ ಆದಾಯ ಮತ್ತು ರಾಷ್ಟ್ರೀಯ ಆರ್ಥಿಕ ಮೌಲ್ಯವಾಗಿ ಪರಿವರ್ತಿಸುತ್ತದೆ ಎಂದು ತಿಳಿಸಿದರು.

---

ಮುಂಬರುವ ೪ನೇ ಆವೃತ್ತಿಯ ಹರ್ ಘರ್ ತಿರಂಗಾ ಅಭಿಯಾನದಲ್ಲಿ ನಾಗರಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಕೇಂದ್ರ ಸಂಸ್ಕೃತಿ ಮತ್ತು ಪ್ರವಾಸೋದ್ಯಮ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಕರೆ ನೀಡಿದ್ದಾರೆ. ನವದೆಹಲಿಯಲ್ಲಿ ಮಾತನಾಡಿದ ಅವರು, ಐದು ವರ್ಷಗಳನ್ನು ಯಶಸ್ವಿಯಾಗಿ ಪೂರೈಸಿರುವ ಅಭಿಯಾನ, ರಾಷ್ಟ್ರೀಯ ಏಕತೆ ಮತ್ತು ಹೆಮ್ಮೆಯ ಸಂಕೇತವಾಗಿ ಜನಾಂದೋಲನವಾಗಿ ರೂಪುಗೊಂಡಿದೆ ಎಂದರು.

ಈ ವರ್ಷದ ಅಭಿಯಾನ, ವಂದೇ ಮಾತರಂನ ೧೫೦ನೇ ವರ್ಷಾಚರಣೆಯೊಂದಿಗೆ ನಡೆಯುತ್ತಿರುವುದರಿಂದ ವಿಶೇಷ ಮಹತ್ವ ಪಡೆದಿದೆ. ಇದೇ ೯ ರಿಂದ ೧೭ರವರೆಗೆ ದೇಶಾದ್ಯಂತ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು.

೨೦೦ಕ್ಕೂ ಹೆಚ್ಚು ಭಾರತೀಯ ರಾಯಭಾರ ಕಚೇರಿಗಳು, ಹೈಕಮಿಷನ್‌ಗಳು ಮತ್ತು ದೂತಾವಾಸ ಕಚೇರಿಗಳು ಅಭಿಯಾನದ ಅಂಗವಾಗಿ ಕಾರ್ಯಕ್ರಮಗಳನ್ನು ಆಯೋಜಿಸಲಿವೆ ಎಂದು ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ತಿಳಿಸಿದ್ದಾರೆ. ಆಗಸ್ಟ್ ೧೫ರಂದು ಫಿಜಿಯಿಂದ ಆರಂಭವಾಗಿ ಸ್ಯಾನ್‌ಫ್ರಾನ್ಸಿಸ್ಕೋದಲ್ಲಿರುವ ಭಾರತೀಯ ದೂತಾವಾಸ ಕಚೇರಿಯಲ್ಲಿ ಅಂತ್ಯಗೊಳ್ಳುವ 'ಸೂರ್ಯ ಪಥ ತಿರಂಗಾ' ಡಿಜಿಟಲ್ ರಿಲೇ ಈ ಬಾರಿಯ ಪ್ರಮುಖ ಆಕರ್ಷಣೆಯಾಗಲಿದೆ ಎಂದು ಅವರು ಹೇಳಿದರು.

---

ಭಾರತ, ನಿನ್ನೆ ಒಡಿಶಾದ ಚಾಂದಿಪುರದ ಸಮಗ್ರ ಪರೀಕ್ಷಾ ವ್ಯಾಪ್ತಿಯಿಂದ ಮಧ್ಯಮ ದೂರದ ಬ್ಯಾಲಿಸ್ಟಿಕ್ ಕ್ಷಿಪಣಿ ಅಗ್ನಿ-೪ ಅನ್ನು ಯಶಸ್ವಿಯಾಗಿ ಪರೀಕ್ಷಿಸಿದೆ. ಕ್ಷಿಪಣಿಯ ಎಲ್ಲಾ ಕಾರ್ಯಾಚರಣಾ ಮತ್ತು ತಾಂತ್ರಿಕ ಮಾನದಂಡಗಳು ಯಶಸ್ವಿಯಾಗಿ ದೃಢಪಟ್ಟಿವೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ.

ಕಾರ್ಯತಂತ್ರ ಪಡೆಗಳ ಕಮಾಂಡ್ ನೇತೃತ್ವದಲ್ಲಿ ಪರೀಕ್ಷೆ ನಡೆಸಲಾಗಿದ್ದು, ದೇಶದ ಕಾರ್ಯತಂತ್ರದ ಪ್ರತಿಬಂಧಕ ಸಾಮರ್ಥ್ಯ ಬಲಪಡಿಸುವ ನಿಟ್ಟಿನಲ್ಲಿ ಇದು ಮತ್ತೊಂದು ಮಹತ್ವದ ಮೈಲಿಗಲ್ಲಾಗಿದೆ ಎಂದು ಸಚಿವಾಲಯ ಹೇಳಿದೆ.

---

ಅಮೆರಿಕದ ಜನ್ಮಸಿದ್ಧ ಪೌರತ್ವವನ್ನು ನಿಯಂತ್ರಿಸುವ ಹಾಗೂ 'ಬರ್ತ್ ಟೂರಿಸಂ' ಅಂದರೆ ಪೌರತ್ವ ಮತ್ತಿತರ ಉದ್ದೇಶಗಳಿಗಾಗಿ ನಿರ್ದಿಷ್ಟ ದೇಶಗಳಲ್ಲಿ ಜನ್ಮ ನೀಡುವುದನ್ನು ತಡೆಯುವ ಉದ್ದೇಶದಿಂದ ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಎರಡು ಕಾರ್ಯಕಾರಿ ಆದೇಶಗಳಿಗೆ ಸಹಿ ಹಾಕಿದ್ದಾರೆ.

ಈ ಕುರಿತು ಮಾತನಾಡಿರುವ ಅವರು, ಈ ವಿಷಯಕ್ಕೆ ಸಂಬಂಧಿಸಿದ ಸರ್ವೋಚ್ಚ ನ್ಯಾಯಾಲಯದ ತೀರ್ಪಿನ ಕುರಿತು ನಿರಾಶೆ ವ್ಯಕ್ತಪಡಿಸಿದ್ದು, ಅದನ್ನು ದುರದೃಷ್ಟಕರ ನಿರ್ಧಾರ ಎಂದು ಬಣ್ಣಿಸಿದ್ದಾರೆ.

ಇದರೊಂದಿಗೆ ಅಮೆರಿಕದ ವಲಸೆ ವ್ಯವಸ್ಥೆಯ ದುರ್ಬಳಕೆಯ ವಿರುದ್ಧ ತಮ್ಮ ಸರ್ಕಾರ, ಅತ್ಯಂತ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುತ್ತಿದೆ ಎಂದು ಅವರು ಸ್ಪಷ್ಟಪಡಿಸಿದ್ದಾರೆ.

---

ನವದೆಹಲಿಯಲ್ಲಿ ೬ನೇ ರಾಷ್ಟ್ರೀಯ ಸಂಸದೀಯ ಬ್ಯಾಡ್ಮಿಂಟನ್ ಚಾಂಪಿಯನ್‌ಶಿಪ್‌ಗೆ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ನಿನ್ನೆ ಚಾಲನೆ ನೀಡಿದರು. ಸಂವಿಧಾನ ಕ್ಲಬ್ ಆಫ್ ಇಂಡಿಯಾದಲ್ಲಿ ನಡೆಯುತ್ತಿರುವ ನಾಲ್ಕು ದಿನಗಳ ಚಾಂಪಿಯನ್‌ಶಿಪ್ ಭಾನುವಾರದವರೆಗೆ ಮುಂದುವರಿಯಲಿದೆ.

ಸಂಸದರಲ್ಲಿ ಸ್ನೇಹ, ಏಕತೆ ಮತ್ತು ಆರೋಗ್ಯಕರ ಸಂವಹನ ಬೆಳೆಸಲು ಕ್ರೀಡಾಕೂಟ ಪ್ರಮುಖ ವೇದಿಕೆಯಾಗಿದೆ ಎಂದು ಸಚಿವರು ಹೇಳಿದರು. ಸಂಸದರು ರಾಜಕೀಯ ಭಿನ್ನಾಭಿಪ್ರಾಯಗಳನ್ನು ಮೀರಿ ಒಗ್ಗೂಡಲು ಕ್ರೀಡೆ ಅವಕಾಶ ಕಲ್ಪಿಸುತ್ತದೆ ಎಂದು ಅವರು ತಿಳಿಸಿದರು.

---

ಪ್ರಧಾನಮಂತ್ರಿ ನರೇಂದ್ರ ಮೋದಿ ಹಾಗೂ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರು ಭಾರತ-ಇಸ್ರೇಲ್ ವಿಶೇಷ ಕಾರ್ಯತಂತ್ರದ ಸಹಭಾಗಿತ್ವದಲ್ಲಿ ಆಗಿರುವ ಪ್ರಗತಿಯನ್ನು ಪರಿಶೀಲಿಸಿದರು. ಎರಡೂ ದೇಶಗಳ ಪರಸ್ಪರ ಹಿತಕ್ಕಾಗಿ ವಿವಿಧ ಕ್ಷೇತ್ರಗಳಲ್ಲಿ ದ್ವಿಪಕ್ಷೀಯ ಸಹಕಾರವನ್ನು ಮತ್ತಷ್ಟು ಬಲಪಡಿಸಲು ಬದ್ಧತೆ ವ್ಯಕ್ತಪಡಿಸಿದರು.

ಪ್ರಧಾನಿ ನರೇಂದ್ರ ಮೋದಿ ಅವರಿಗೆ ನಿನ್ನೆ ಇಸ್ರೇಲ್ ಪ್ರಧಾನಿಯವರು ದೂರವಾಣಿ ಕರೆ ಮಾಡಿದ್ದು, ಪಶ್ಚಿಮ ಏಷ್ಯಾದ ಇತ್ತೀಚಿನ ಬೆಳವಣಿಗೆಗಳ ಬಗ್ಗೆಯೂ ಇಬ್ಬರೂ ನಾಯಕರು ಅಭಿಪ್ರಾಯ ವಿನಿಮಯ ಮಾಡಿಕೊಂಡರು.

---

ಸಮಗ್ರ ಕಾರ್ಯತಂತ್ರದ ಸಹಭಾಗಿತ್ವದ ಮಾರ್ಗಸೂಚಿಯಡಿ ಗುರುತಿಸಲಾಗಿರುವ ಎಂಟು ಕ್ಷೇತ್ರಗಳಲ್ಲಿನ ದ್ವಿಪಕ್ಷೀಯ ಸಹಕಾರದ ಪ್ರಗತಿಯನ್ನು ಭಾರತ ಮತ್ತು ಸಿಂಗಾಪುರ ಪರಿಶೀಲಿಸಿವೆ.

ನವದೆಹಲಿಯಲ್ಲಿ ನಡೆದ ೧೯ನೇ ಸುತ್ತಿನ ಭಾರತ-ಸಿಂಗಾಪುರ ವಿದೇಶಾಂಗ ಕಚೇರಿ ಸಮಾಲೋಚನೆಯಲ್ಲಿ ಉಭಯ ದೇಶಗಳು ಪ್ರಾದೇಶಿಕ ಮತ್ತು ಜಾಗತಿಕ ಬೆಳವಣಿಗೆಗಳ ಕುರಿತು ಅಭಿಪ್ರಾಯ ವಿನಿಮಯ ಮಾಡಿಕೊಂಡವು.

---

ಅಸಾನ್‌ನಲ್ಲಿ ನಡೆಯುತ್ತಿರುವ ಕೊರಿಯಾ ಮಾಸ್ಟರ್ಸ್ ಬ್ಯಾಡ್ಮಿಂಟನ್‌ನ ಮಹಿಳಾ ಸಿಂಗಲ್ಸ್ ಕ್ವಾರ್ಟರ್ ಫೈನಲ್‌ನಲ್ಲಿ ಇಂದು, ಭಾರತದ ತನ್ವಿ ಶರ್ಮಾ, ಭಾರತದವರೇ ಆದ ರಕ್ಷಿತಾ ರಾಮರಾಜ್ ಅವರನ್ನು ಎದುರಿಸಲಿದ್ದಾರೆ.

ಪ್ರಿ-ಕ್ವಾರ್ಟರ್ ಫೈನಲ್‌ನಲ್ಲಿ ತನ್ವಿ ಮತ್ತೊಬ್ಬ ಭಾರತೀಯ ಆಟಗಾರ್ತಿ ಶ್ರಿಯಾಂಶಿ ವಾಲಿಶೆಟ್ಟಿ ಅವರನ್ನು ಸೋಲಿಸುವ ಮೂಲಕ ಕ್ವಾರ್ಟರ್ ಫೈನಲ್‌ಗೆ ಮುನ್ನಡೆದರೆ, ರಕ್ಷಿತಾ, ಜಪಾನ್‌ನ ಮನಾಮಿ ಸುಯಿಜು ಅವರನ್ನು ಸೋಲಿಸುವ ಮೂಲಕ ಕ್ವಾರ್ಟರ್ ಫೈನಲ್‌ಗೆ ಪ್ರವೇಶ ಪಡೆದರು.

ಇನ್ನು ಅಶ್ಮಿತಾ ಚಲಿಹಾ ಮತ್ತೊಂದು ಮಹಿಳಾ ಸಿಂಗಲ್ಸ್ ಕ್ವಾರ್ಟರ್ ಫೈನಲ್‌ನಲ್ಲಿ ಜಪಾನ್‌ನ ಹಿನಾ ಅಕೇಚಿ ಅವರನ್ನು ಎದುರಿಸಲಿದ್ದಾರೆ. ದಕ್ಷಿಣ ಕೊರಿಯಾದ ಕಿಮ್ ಮಿನ್ ಜಿ ವಿರುದ್ಧ ಜಯ ಸಾಧಿಸುವ ಮೂಲಕ ಅಶ್ಮಿತಾ, ಕೊನೆಯ ಎಂಟರ ಘಟ್ಟಕ್ಕೆ ತಲುಪಿದ್ದಾರೆ.

ಇನ್ನು ಪುರುಷರ ಡಬಲ್ಸ್ ಕ್ವಾರ್ಟರ್ ಫೈನಲ್‌ನಲ್ಲಿ, ಭಾರತದ ಪೃಥ್ವಿ ಕೃಷ್ಣಮೂರ್ತಿ ರಾಯ್ ಮತ್ತು ಕೃಷ್ಣ ಪ್ರಸಾದ್ ಗರಗ ಜೋಡಿ, ಸೆಮಿಫೈನಲ್‌ನಲ್ಲಿ ಸ್ಥಾನ ಪಡೆಯಲು, ಮಲೇಷ್ಯಾದ ಮನ್ ವೀ ಚೋಂಗ್ ಮತ್ತು ಸೋಹ್ ವೂಯಿ ಯಿಕ್ ಜೋಡಿಯನ್ನು ಎದುರಿಸಲಿದೆ.

---

ದುಬೈನಲ್ಲಿ ನಡೆಯಲಿರುವ ಮಹಿಳಾ ಟಿ೨೦ ಏಷ್ಯಾ ಕಪ್ ೨೦೨೬ರ ವೇಳಾಪಟ್ಟಿಯನ್ನು ಏಷ್ಯನ್ ಕ್ರಿಕೆಟ್ ಮಂಡಳಿ ಪ್ರಕಟಿಸಿದೆ. ಆಗಸ್ಟ್ ೨೮ ರಂದು ಥೈಲ್ಯಾಂಡ್ ಹಾಗೂ ಹಾಂಗ್ ಕಾಂಗ್ ನಡುವಿನ ಪಂದ್ಯದೊಂದಿಗೆ ಸರಣಿ ಆರಂಭವಾಗಲಿದ್ದು, ಸೆಪ್ಟೆಂಬರ್ ೧೩ ರಂದು ಫೈನಲ್ ಪಂದ್ಯ ನಡೆಯಲಿದೆ. ಟಿ೨೦ ಮಾದರಿಯ ಈ ಆರನೇ ಆವೃತ್ತಿಯ ಪ್ರಮುಖ ಪಂದ್ಯದಲ್ಲಿ ಸೆಪ್ಟೆಂಬರ್ ೫ ರಂದು ದುಬೈ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ಭಾರತ ಮತ್ತು ಪಾಕಿಸ್ತಾನ ತಂಡಗಳು ಮುಖಾಮುಖಿಯಾಗಲಿವೆ.

ಪಂದ್ಯಾವಳಿಯಲ್ಲಿ ಒಟ್ಟು ಎಂಟು ತಂಡಗಳು ಎರಡು ಗುಂಪುಗಳಲ್ಲಿ ಸ್ಪರ್ಧಿಸಲಿವೆ. ‘ಎ’ ಗುಂಪಿನಲ್ಲಿ ಭಾರತ, ಪಾಕಿಸ್ತಾನ, ಥೈಲ್ಯಾಂಡ್, ಹಾಂಗ್ ಕಾಂಗ್ ಮತ್ತು ಚೀನಾ ತಂಡಗಳಿದ್ದರೆ, ‘ಬಿ’ ಗುಂಪಿನಲ್ಲಿ ಶ್ರೀಲಂಕಾ, ಬಾಂಗ್ಲಾದೇಶ, ಯುಎಇ ಹಾಗೂ ಇಂಡೋನೇಷ್ಯಾ ಸ್ಥಾನ ಪಡೆದಿವೆ. ಹಾಲಿ ಚಾಂಪಿಯನ್ ಶ್ರೀಲಂಕಾ ಮತ್ತು ೨೦೧೮ರ ಚಾಂಪಿಯನ್ ಬಾಂಗ್ಲಾದೇಶ ಪಂದ್ಯಾವಳಿಯ ಪ್ರಮುಖ ಸ್ಪರ್ಧಿಗಳಾಗಿದ್ದು, ೨೦೧೨, ೨೦೧೬ ಮತ್ತು ೨೦೨೨ ರಲ್ಲಿ ಮೂರು ಬಾರಿ ಪ್ರಶಸ್ತಿ ಗೆದ್ದಿರುವ ಭಾರತ ಸರಣಿಯ ಅತ್ಯಂತ ಯಶಸ್ವಿ ತಂಡವಾಗಿದೆ.

---

ಭಾರತೀಯ ಹವಾಮಾನ ಇಲಾಖೆ, ಕೇರಳದಾದ್ಯಂತ ಭಾರೀ ಮಳೆಯಾಗುವ ಮುನ್ಸೂಚನೆ ನೀಡಿದೆ. ಪತ್ತನಂತಿಟ್ಟ, ಕೊಟ್ಟಾಯಂ ಮತ್ತು ಇಡುಕ್ಕಿ ಜಿಲ್ಲೆಗಳಲ್ಲಿ ರಾತ್ರಿಯಿಡೀ ಜಾರಿಯಲ್ಲಿದ್ದ ರೆಡ್ ಅಲರ್ಟ್ ಅನ್ನು ಇಂದು ಆರೆಂಜ್ ಅಲರ್ಟ್ ಆಗಿ ಘೋಷಿಸಲಾಗಿದ್ದು ಇತರ ಐದು ಜಿಲ್ಲೆಗಳಲ್ಲಿಯೂ ಇದು ಜಾರಿಯಲ್ಲಿದೆ.

ಉಳಿದ ಆರು ಜಿಲ್ಲೆಗಳಿಗೆ ಎಲ್ಲೋ ಅಲರ್ಟ್ ಘೋಷಿಸಲಾಗಿದೆ.

__________ ಮುಕ್ತಾಯ __________